# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1138 (1379)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ರಾಜ್ಯದ ನಗರಗಳಲ್ಲಿ ಅಂತರ್ಜಲದ ಮಟ್ಟ ಸುಧಾರಣೆ ಕುರಿತು

(ಅ) ಕಳೆದ ಐದು ವರ್ಷಗಳಿಂದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಂಸ್ಥೆಯ ಕಾರ್ಯವ್ಯಾಪ್ತಿ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟದ ಸುಧಾರಣೆಗೆ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಿಂದ ಈ ಪ್ರದೇಶಗಳಲ್ಲಿ ಕರ್ನಾಟಕ ಅಂತರ್ಜಲ ಕಾಯ್ದೆ 1999ರಡಿಯ ಪ್ರಕಾರ ಯಾವುದೇ ಅಧಿಕೃತ ಪ್ರಾಧಿಕಾರದ ಅನುಮತಿ ಪಡೆಯದೆ ಅಂತರ್ಜಲ ಉಪಯೋಗಿಸಿದವರ ವಿರುದ್ಧ ದಾಖಲಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ ; ಮತ್ತು ಎಷ್ಟು ಇಲಾಖೆಯಿಂದ ಕ್ರಮಕೈಗೊಳ್ಳಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣಗಳ ವಿವರ ನೀಡುವುದು)

(ಇ) ಅನಧಿಕೃತ ಬಡಾವಣೆಗಳ ನಿರ್ಮಾಣದಿಂದ ಉದ್ಭವಿಸಿರುವ ಅವೈಜ್ಞಾನಿಕ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆಯುಳ್ಳ ಬಡಾವಣೆಗಳ ವಿರುದ್ಧ ಇಲಾಖೆಯಿಂದ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಅಧಿಕೃತ/ಅನಧಿಕೃತ ಕಾರ್ಖಾನೆಗಳಿಂದ ಹೊರಬರುವ ಮಲೀನ ನೀರನ್ನು ಸಮರ್ಪಕವಾಗಿ ಸಂಸ್ಕರಿಸದೇ ಅಕ್ಕಪಕ್ಕದ ಕೊಳ್ಳ/ಹಳ್ಳಗಳಿಗೆ ಅನಧಿಕೃತವಾಗಿ ಹರಿಯಬಿಡುವವರ ವಿರುದ್ಧ ಇಲಾಖೆಯಿಂದ ಕೈಗೊಳ್ಳಲಾದ ಕ್ರಮವೇ ನು ? (ಸಂಪೂರ್ಣ ವಿವರ ನೀಡುವುದು)